ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ರಾಯಚೂರು ಜಿಲ್ಲೆಯಲ್ಲಿರುವ ವಸತಿ ಶಾಲೆಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):-

174 (268) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ವಸತಿ ಶಾಲೆEಗಳು ಎಷ್ಟು; ಇದರಲ್ಲಿ, ಸ್ವಂತ ಕಟ್ಟಡಗಳು ಇರುವ ವಸತಿ ಶಾಲೆಗಳು ಎಷ್ಟು; ಬಾಡಿಗೆ ಇರುವ ವಸತಿ ಶಾಲೆಗಳು ಎಷ್ಟು;

(ಆ) ರಾಯಚೂರು ನಗರದಲ್ಲಿ ಡಾ: ಬಾಬು ಜಗಜೀವನ್‌ರಾಂ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಸದರಿ ಭವನಕ್ಕೆ ಮಂಜೂರಾಗಿರುವ ಅನುದಾನ ಎಷ್ಟು;

(ಇ) ರಾಯಚೂರು ನಗರದಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಹಂಚಿಕೆ ಮಾಡಿರುವ ನಿವೇಶನ ಎಷ್ಟು; ಸದರಿ ಭವನ ನಿರ್ಮಾಣಕ್ಕೆ ಮಂಜೂರಾತಿಯಾಗಿರುವ ಅನುದಾನ ಎಷ್ಟು?